**CC 3212/2023**

**ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಗಳ ನ್ಯಾಯಾಲಯ, ಹೊಸಪೇಟೆ.**

**ಸಿಸಿ ನಂಬರ್ 3212/2023**

**ಸಿ ಡಬ್ಲೂ -3**
**ಪಿ ಡಬ್ಲೂ - 3**

| | |
|---|---|
| **ಸಾಕ್ಷಿಯ ಹೆಸರು -** | **ಬೆಟ್ಟದೇಶ** |
| **ತಂದೆಯ ಹೆಸರು -** | **ಜಂಬಪ್ಪ** |
| **ವಯಸ್ಸು -** | 65 **ವರ್ಷಗಳು** |
| **ಉದ್ಯೋಗ -** | **ವ್ಯವಸಾಯ** |
| **ವಾಸಸ್ಥಳ -** | **ಹೊಸಪೇಟೆ** |

**ಸಾಕ್ಷಿಯನ್ನು ದಿನಾಂಕಃ 03-07-2025 ರಂದು ಪ್ರಾಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎ. ಪಿ. ಪಿ. ಅವರಿಂದ**

ಈಗ ನಾನು ನೋಡುತ್ತಿರುವ ದಾಖಲೆಯಲ್ಲಿನ ಸಹಿ ನನ್ನದೇ ಆಗಿರುತ್ತದೆ. ಸಾಕ್ಷಿ ಕೃತ್ಯ ಸ್ಥಳ ಪಂಚನಾಮೆಯಲ್ಲಿನ ಸಹಿ ನೋಡಿ ಗುರುತಿಸಿರುತ್ತಾರೆ. ಸದರಿ ಪಂಚನಾಮೆಯನ್ನು ಈಗಾಗಲೇ ನಿಪಿಃ **2** ಎಂದು ಗುರುತಿಸಲಾಗಿದೆ. ಸಾಕ್ಷಿಯ ಸಹಿಯನ್ನು ನಿಪಿಃ **2(**ಸಿ**)** ಎಂದು ಗುರುತಿಸಲಾಯಿತು.

ಸದರಿ ಸಹಿಯನ್ನು ಪೋಲಿಸ ಠಾಣೆಯಲ್ಲಿ ಮಾಡಿರುತ್ತೇನೆ. ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಆಗಿಲ್ಲ. ಸಾಕ್ಷಿ ನಿಪಿಃ **3** ರ ಪೋಟೋ ನೋಡಿ ಗುರುತಿಸಿರುತ್ತಾರೆ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಮಾನ್ಯ ಎ.ಪಿ.ಪಿ. ಅವರು ಅನುಮತಿ ಕೇಳಿದ್ದು, ಅನುಮತಿಯನ್ನು ನೀಡಲಾಯಿತು.)**

**CC 3212/2023**

**ಪಾಟೀ ಸವಾಲು ಮಾನ್ಯ ಎ ಪಿ ಪಿ ಅವರಿಂದಃ**

ದಿಃ 30-05-2023 ರಂದು ಪ್ರಕರಣದ ಘಟನಾ ಸ್ಥಳವಾದ ರಾಣಿ ಪೇಟೆಯ ಚಾಸಾ -1 ರವರ ತಮ್ಮ ರಾಘವೇಂದ್ರರವರ ಮನೆಯಲ್ಲಿ ನನ್ನ ಮತ್ತು ಚಾಸಾ -2 ರವರ ಸಮಕ್ಷಮ ಪೋಲಿಸರು ನಿಪಿಃ 2 ರ ಪಂಚನಾಮೆಯನ್ನು ಬೆಳಿಗ್ಗೆ 10.00 ರಿಂದ 11.00 ಗಂಟೆಯವರೆಗೆ ಮಾಡಿರುತ್ತಾರೆ ಅಂದರೆ ಸರಿಯಲ್ಲ. ಸದರಿ ಪಂಚನಾಮೆಯಲ್ಲಿನ ಅಂಶಗಳನ್ನು ತಿಳಿದು ಸ್ಥಳದಲ್ಲಿಯೇ ಅದಕ್ಕೆ ಸಹಿ ಮಾಡಿರುತ್ತೇನೆ ಅಂದರೆ ಸರಿಯಲ್ಲ. ನಿಪಿಃ 2 ಕ್ಕೆ ಸ್ಥಳದಲ್ಲಿ ಸಹಿ ಮಾಡಿದ್ದಿರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಅಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿ ಪರ ಶ್ರೀ ಎ ಕೆ ಎನ್.,ವಕೀಲರಿಂದಃ** ಇಲ್ಲಾ.

ಮರುವಿಚಾರಣೆ ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೇ. ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು
ಹಾಗೂ ಜೆ.ಎಂ.ಎಫ್.ಸಿ., ಹೊಸಪೇಟೆ.